ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

155 (139) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2014-15 ರಿಂದ 2018-19ರವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಲಭ್ಯವಿದ್ದ ಮೊತ್ತವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಅವಧಿಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಲಭ್ಯವಿದ್ದ ಮೊತ್ತದಲ್ಲಿ ಎಷ್ಟು ಮೊತ್ತವನ್ನು ಕಲ್ಯಾಣ ಯೋಜನೆಗಳಿಗೆ ಬಳಸಿಕೊಳ್ಳಲಾಗಿತ್ತು; ಯಾವ ಯಾವ ಯೋಜನೆಗಳಿಗೆ ಎಷ್ಟು ಮೊತ್ತ ಬಳಸಿಕೊಳ್ಳಲಾಗಿತ್ತು; (ಫಲಾನುಭವಿಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) 2014-15 ರಿಂದ 2018-19ರವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ರೂ.2358.94 ಕೋಟಿಗಳ ಅಸಮರ್ಪಕ ನಿರ್ವಹಣೆಯಿಂದಾಗಿ ಅನಗತ್ಯ ವೆಚ್ಚವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಯಾರ ಮೇಲೆ ಕ್ರಮ ಕೈಗೊಳ್ಳಲಾಗಿದೆ ?